66

**ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಗೋವಿಂದರಾಜು, ಇವರು ನಿಯಮ-330ರಡಿ ಮಂಡಿಸಿರುವ ಸೂಚನೆಗೆ ಮಾನ್ಯ ಸಾರಿಗೆ ಮತ್ತು ಮುಜರಾಯಿ ಸಚಿವರ ಉತ್ತರ.**

ಪ್ರಶ್ನೆ:

ಸರ್ಕಾರಿ ಬಸ್ಸಿನಲ್ಲಿ ರಾಜ್ಯ ಸರ್ಕಾರ ಮಹಿಳೆಯರಿಗೆ ಉಚಿತ ಪ್ರಯಾಣದ 'ಶಕ್ತಿ' ಯೋಜನೆಯನ್ನು ಕಲ್ಪಿಸಿದೆ. ಆದರೆ ರಾಜ್ಯದ ಎಲ್ಲಾ ಜಿಲ್ಲೆಗಳಲ್ಲೂ ಬಸ್ಸಿನ ವ್ಯವಸ್ಥೆ ಇಲ್ಲ. ಇನ್ನು ಕೆಲವೆಡೆ ಬೆಳಿಗ್ಗೆ ಹಾಗೂ ಸಂಜೆ ಮಾತ್ರ ಬಸ್ಸಿನ ವ್ಯವಸ್ಥೆ ಇದೆ. ಈ ಹಿನ್ನಲೆಯಲ್ಲಿ ಮಹಿಳೆಯರು ಖಾಸಗಿ ಬಸ್ ಅಥವಾ ಆಟೋರಿಕ್ಷವನ್ನೇ ಅವಲಂಬಿಸಬೇಕಿದೆ. ಇದರಿಂದ ವಿದ್ಯಾರ್ಥಿಗಳು, ವ್ಯಾಪರಸ್ಥರು ಹಾಗೂ ಉದ್ಯೋಗಸ್ಥರಿಗೆ ತೊಂದರೆಯಾಗಿದೆ. ಇದಲ್ಲದೇ, ಕೆಎಸ್‌ಆರ್‌ಟಿಸಿ, ವಾಯುವ್ಯ ಕರ್ನಾಟಕ, ಕಲ್ಯಾಣ ಕರ್ನಾಟಕ ಬಸ್‌ಗಳಲ್ಲಿ 55 ಮಂದಿ ಪ್ರಯಾಣಿಕರನ್ನು ಕರೆದೊಯ್ಯುವ ಸಾಮರ್ಥ್ಯವಿದೆ. ಬಿಎಂಟಿಸಿ ಬಸ್‌ಗಳಲ್ಲಿ 40 ಮಂದಿ ಪ್ರಯಾಣಿಕರ ಕರೆದೊಯ್ಯುವ ಸಾಮರ್ಥ್ಯವಿದೆ. ಆದರೆ ಮಹಿಳೆಯರಿಗೆ ಉಚಿತ ಬಸ್ ಪ್ರಯಾಣದ 'ಶಕ್ತಿ' ಯೋಜನೆ ಜಾರಿಯಾದ ಬಳಿಕ ಒಂದು ಬಸ್ಸಿನಲ್ಲಿ 100ಕ್ಕೂ ಅಧಿಕ ಪ್ರಯಾಣಿಕರು ಪ್ರಯಾಣಿಸುತ್ತಿದ್ದಾರೆ. ಇದರಿಂದ ಬಸ್‌ಗಳನ್ನು ಚಲಾಯಿಸುವಾಗ ನಿಯಂತ್ರಿಸುವುದು ಭಾರಿ ಕಷ್ಟವಾಗುತ್ತಿದೆ. ಈ ಹಿನ್ನಲೆಯಲ್ಲಿ ಹೆಚ್ಚಿನ ಬಸ್ಸುಗಳನ್ನು ವ್ಯವಸ್ಥೆ ಮಾಡುವ ಸಂಬಂಧವಾಗಿ ನಿಯಮ 330 ರಡಿಯಲ್ಲಿ ಪ್ರಸ್ತಾಪಿಸಲು ಅನುಮತಿ ನೀಡಬೇಕೆಂದು ಕೋರುತ್ತೇನೆ.

ಉತ್ತರ:

ಶಕ್ತಿ ಯೋಜನೆಯಡಿ ಮಹಿಳೆಯರಿಗೆ ಉಚಿತ ಸಾರಿಗೆ ವ್ಯವಸ್ಥೆ ಕಲ್ಪಿಸಿರುವುದರಿಂದ ಸರ್ಕಾರಿ ಬಸ್‌ಗಳಲ್ಲಿ ಸಂಚರಿಸುವವರ ಸಂಖ್ಯೆ ಗಣನೀಯವಾಗಿ ಹೆಚ್ಚಾಗಿದ್ದು, ಇದರಿಂದಾಗಿ ಶಾಲಾ ಮಕ್ಕಳು ಅನಾನುಕೂಲವಾಗುತ್ತಿರುವ ಬಗ್ಗೆ ಕೆಲವು ಸ್ಥಳಗಳಲ್ಲಿ ವರದಿಯಾಗಿದ್ದು, ಅಂತಹ ಸ್ಥಳಗಳನ್ನು ಗುರುತಿಸಿ ಆ ಸ್ಥಳಗಳಿಗೆ ನಿಗಮದ ಸಿಬ್ಬಂದಿಗಳನ್ನು ಮೇಲ್ವಿಚಾರಣೆಗಾಗಿ ನಿಯೋಜಿಸಲಾಗುತ್ತಿದೆ ಹಾಗೂ ಬೇಡಿಕೆಗೆ ಅನುಗುಣವಾಗಿ ಹೆಚ್ಚುವರಿ ಸರತಿಗಳನ್ನು ಅಳವಡಿಸಲು ಕ್ರಮ ವಹಿಸಲಾಗುತ್ತಿದೆ.

ಶಾಲಾ/ಕಾಲೇಜು ವಿದ್ಯಾರ್ಥಿಗಳಿಗೆ ಅವರ ಶಾಲಾ ಕಾಲೇಜು ಸಮಯಕ್ಕೆ ಅವಶ್ಯಕತೆಗೆ ಅನುಗುಣವಾಗಿ ಸುತ್ತುವಳಿಗಳು/ಬಸ್ಸುಗಳನ್ನು ಕಲ್ಪಿಸಲು ಈ ಕೆಳಕಂಡ ಅಂಶಗಳನ್ನು ಅನುಸರಿಸಲು ಸಂಬಂಧಿಸಿದ ಅಧಿಕಾರಿಗಳಿಗೆ ಸೂಚನೆಗಳನ್ನು ನೀಡಲಾಗಿದೆ:

- ಗ್ರಾಮೀಣ ಪ್ರದೇಶಗಳ ವಿಭಾಗದ ವ್ಯಾಪ್ತಿಯಲ್ಲಿ ಬರುವ ಶಾಲಾ/ ಕಾಲೇಜುಗಳ ಪ್ರಾಂಶುಪಾಲರು/ ಮುಖ್ಯಸ್ಥರುಗಳನ್ನು ಸಂಪರ್ಕಿಸಿ, ಶಾಲಾ/ಕಾಲೇಜುಗಳ ಸಮಯಗಳನ್ನು ತಿಳಿದುಕೊಂಡು ಸದರಿ ಸಮಯಕ್ಕೆ ಸಾರಿಗೆಗಳನ್ನು ಕಾರ್ಯಾಚರಿಸಲು ಸೂಕ್ತ ಕ್ರಮ ಕೈಗೊಳ್ಳಲು.
- ಶಾಲಾ/ ಕಾಲೇಜು ವಿದ್ಯಾರ್ಥಿಗಳು ಹೆಚ್ಚಿಗೆ ಸೇರುವ ಬಸ್ ನಿಲ್ದಾಣ/ಜಂಕ್ಷನ್‌ಗಳಲ್ಲಿ ಸಾರಿಗೆ ಸೇವೆಗಳ ಮೇಲ್ವಿಚಾರಣೆಗೆ ಸಂಚಾರ ನಿಯಂತ್ರಕರು/ ಇತರೆ ಮೇಲ್ವಿಚಾರಕರನ್ನು ತಪ್ಪದೇ ನಿಯೋಜಿಸಿ ಸುಗಮ ಕಾರ್ಯಾಚರಣೆ ಬಗ್ಗೆ ನಿಗಾ ವಹಿಸಲು.
- ವಿಭಾಗದ ಎಲ್ಲಾ ಚಾಲನಾ ಸಿಬ್ಬಂದಿಗಳಿಗೆ ಶಾಲಾ ಕಾಲೇಜು ವಿದ್ಯಾರ್ಥಿಗಳು ಬಸ್ಸುಗಳಲ್ಲಿ ಪ್ರಯಾಣಿಸಲು ಅನುವಾಗಲು ನಿಗದಿತ ಬಸ್ ನಿಲ್ದಾಣಗಳಲ್ಲಿ ನಿಲುಗಡೆ ನೀಡಿ ಅವರನ್ನು ಹತ್ತಿಸಿ/ಇಳಿಸಿಕೊಂಡು ಮುಂದೆ ಹೋಗುವುದರ ಜೊತೆಗೆ ವಿದ್ಯಾರ್ಥಿಗಳೊಂದಿಗೆ ಸೌಜನ್ಯಯುತವಾಗಿ ವರ್ತಿಸಲು ತಿಳುವಳಿಕೆ ನೀಡಲು.

ಶಕ್ತಿ ಯೋಜನೆಯಡಿ ಮಹಿಳೆಯರಿಗೆ ನೀಡಲಾಗುತ್ತಿರುವ ಉಚಿತ ಬಸ್ ಪ್ರಯಾಣ ಯೋಜನೆಯಡಿ ಪ್ರಯಾಣಿಸಿದ ಸರಾಸರಿ ಮಹಿಳೆಯರ ಸಂಖ್ಯೆ, ಪ್ರತಿ ದಿನ ತಗಲಬಹುದಾದ ಅಂದಾಜು ಮೊತ್ತ ಮತ್ತು ಒಟ್ಟು ಅಂದಾಜು ವಾರ್ಷಿಕ ಸರಾಸರಿ ಮೊತ್ತದ ಮಾಹಿತಿ ಈ ಕೆಳಕಂಡಂತಿದೆ:

(ರೂ.ಕೋಟಿಗಳಲ್ಲಿ)

| ಸಂಸ್ಥೆ | ಸರಾಸರಿ ಮಹಿಳೆಯರ ಸಂಖ್ಯೆ | ಅಂದಾಜು ಮೊತ್ತ | ಒಟ್ಟು ಅಂದಾಜು ವಾರ್ಷಿಕ ಸರಾಸರಿ ಮೊತ್ತ |
|---|---|---|---|
| ಕ.ರಾ.ರ.ಸಾ.ನಿಗಮ | 13.93 ಲಕ್ಷ | 4.42 | 1563.60 |
| ಬೆಂ.ಮ.ಸಾ.ಸಂಸ್ಥೆ | 17.29 ಲಕ್ಷ | 2.25 | 821.25 |
| ವಾ.ಕ.ರ.ಸಾ.ಸಂಸ್ಥೆ | 13.95 ಲಕ್ಷ | 3.55 | 1295.75 |
| ಕ.ಕ.ರ.ಸಾ.ನಿಗಮ | 7.03 ಲಕ್ಷ | 2.36 | 850.00 |

ಮುಂದುವರೆದು, ನಾಲ್ಕು ಸಾರಿಗೆ ಸಂಸ್ಥೆಗಳಲ್ಲಿ ಹೆಚ್ಚುವರಿ ಸರತಿಗಳನ್ನು ಕಾರ್ಯಚರಿಸಲಾಗುತ್ತಿದ್ದು, ಮಾಹಿತಿ ಈ ಕೆಳಕಂಡಂತಿದೆ:

ಕ.ರಾ.ರ.ಸಾ.ನಿಗಮ:

ಶಕ್ತಿ ಯೋಜನ ಜಾರಿಗೂ ಮೊದಲು 45255 ಸರತಿಗಳನ್ನು ಕಾರ್ಯಾಚರಣೆ ಮಾಡಲಾಗುತ್ತಿತ್ತು. ಸದರಿ ಯೋಜನೆ ಜಾರಿ ನಂತರದಲ್ಲಿ 45678 ಸರತಿಗಳನ್ನು ಕಾರ್ಯಾಚರಣೆ ಮಾಡಲಾಗುತ್ತಿದೆ. ಪ್ರತಿದಿನ 423 ಹೆಚ್ಚುವರಿ ಸರತಿಗಳನ್ನು ಕಾರ್ಯಾಚರಣೆ ಮಾಡಲಾಗುತ್ತಿದೆ.

**ಬೆಂ.ಮ.ಸಾ.ಸಂಸ್ಥೆ:**

ಶಕ್ತಿ ಯೋಜನೆ ಜಾರಿಗೂ ಮೊದಲು 51873 ಸುತ್ತಿವಳಿಗಳನ್ನು ಕಾರ್ಯಾಚರಣೆ ಮಾಡಲಾಗುತ್ತಿತ್ತು. ಸದರಿ ಯೋಜನೆ ಜಾರಿ ನಂತರದಲ್ಲಿ 52861 ಸುತ್ತಿವಳಿಗಳನ್ನು ಕಾರ್ಯಾಚರಣೆ ಮಾಡಲಾಗುತ್ತಿದೆ. ಪ್ರತಿದಿನ 988 ಹೆಚ್ಚುವರಿ ಸುತ್ತುವಳಿಗಳನ್ನು ಕಾರ್ಯಾಚರಣೆ ಮಾಡಲಾಗುತ್ತಿದೆ.

**ವಾ.ಕ.ರ.ಸಾ.ಸಂಸ್ಥೆ:**

ಶಕ್ತಿ ಯೋಜನೆ ಜಾರಿಗೂ ಮೊದಲು 34054 ಸರತಿಗಳನ್ನು ಕಾರ್ಯಾಚರಣೆ ಮಾಡಲಾಗುತ್ತಿತ್ತು ಸದರಿ ಯೋಜನೆ ಜಾರಿ ನಂತರದಲ್ಲಿ 34940 ಸರತಿಗಳನ್ನು ಕಾರ್ಯಾಚರಣೆ ಮಾಡಲಾಗುತ್ತಿದೆ. ಪ್ರತಿದಿನ 886 ಹೆಚ್ಚುವರಿ ಸರತಿಗಳನ್ನು ಕಾರ್ಯಾಚರಣೆ ಮಾಡಲಾಗುತ್ತಿದೆ.

**ಕ.ಕ.ರ.ಸಾ.ನಿಗಮ:**

ಶಕ್ತಿ ಯೋಜನೆ ಜಾರಿಗೂ ಮೊದಲು 22214 ಸರತಿಗಳನ್ನು ಕಾರ್ಯಾಚರಣೆ ಮಾಡಲಾಗುತ್ತಿತ್ತು. ಸದರಿ ಯೋಜನೆ ಜಾರಿಯಾದ ನಂತರ 24184 ಸರತಿಗಳನ್ನು ಕಾರ್ಯಾಚರಣೆ ಮಾಡಲಾಗುತ್ತಿದೆ. ಪ್ರತಿದಿನ 1970 ಹೆಚ್ಚುವರಿ ಸರತಿಗಳನ್ನು ಕಾರ್ಯಾಚರಣೆ ಮಾಡಲಾಗುತ್ತಿದೆ.

ಅಲ್ಲದೇ, **2023-24**ನೇ ಸಾಲಿನ ಕ್ರಿಯಾ ಯೋಜನೆಯಂತೆ ಹೊಸ ವಾಹನಗಳನ್ನು ಸೇರಿಸುವ ಅವಶ್ಯವಿದ್ದು, ಈ ಬಗ್ಗೆ ಯೋಜನೆ ರೂಪಿಸಲಾಗುತ್ತಿದೆ.

ಕ.ರಾ.ರ.ಸಾ.ನಿಗಮ:

ಪ್ರಸ್ತುತ 550 ಕರ್ನಾಟಕ ಸಾರಿಗೆ ವಾಹನಗಳನ್ನು ಖರೀದಿಸಲು ಯೋಜಿಸಲಾಗಿದೆ. 2023-24ನೇ ಸಾಲಿನಲ್ಲಿ ಎಲ್ಲಾ ಮಾದರಿಯ ಒಟ್ಟು 2250 ವಾಹನಗಳನ್ನು ಸೇರ್ಪಡೆಗೊಳಿಸಲು ಯೋಜಿಸಿದೆ.

ಬೆಂ.ಮ.ಸಾ.ಸಂಸ್ಥೆ:

ಸಂಸ್ಥೆಯಲ್ಲಿ 921 ಜಿ.ಸಿ.ಸಿ. ಮಾದರಿಯ ಎಲೆಕ್ಟ್ರಿಕ್ ಬಸ್‌ಗಳನ್ನು ಸೇರ್ಪಡೆಗೊಳಿಸಲು ಕ್ರಮ ಕೈಗೊಳ್ಳಲಾಗುತ್ತಿದೆ. ಇದರೊಂದಿಗೆ, 840 ಡೀಸೆಲ್ ಬಸ್‌ಗಳನ್ನು ಖರೀದಿಸಲು , 100 ಜಿ.ಸಿ.ಸಿ. ಮಾದರಿ ಮಿನಿ ಎಲೆಕ್ಟ್ರಿಕ್ ಬಸ್ಸುಗಳನ್ನು ಕಾರ್ಯಾಚರಿಸಲು ಮತ್ತು 20 ಮಿನಿ ಎಲೆಕ್ಟ್ರಿಕ್ ಬಸ್ಸುಗಳನ್ನು ಖರೀದಿಸುವ ಪ್ರಕ್ರಿಯೆ ಜಾರಿಯಲ್ಲಿರುತ್ತದೆ.

ವಾ.ಕ.ರ.ಸಾ.ಸಂಸ್ಥೆ:

ಪ್ರಸ್ತುತ 285 ಗ್ರಾಮಾಂತರ ಮಾದರಿಯ ವಾಹನಗಳನ್ನು ಖರೀದಿಸಲು ಸರ್ಕಾರದಿಂದ ಅನುಮತಿಸಲಾಗಿದ್ದು, ಅದರಂತೆ ವಾಹನಗಳನ್ನು ಖರೀದಿ ಪ್ರಕ್ರಿಯೆ ಕ್ರಮ ಜಾರಿಯಲ್ಲಿರುತ್ತದೆ. ಇದಲ್ಲದೆ GCC ಮಾದರಿಯಲ್ಲಿ ಒಟ್ಟು 450 ಎಲೆಕ್ಟ್ರಿಕ್ ವಾಹನಗಳನ್ನು ಅಳವಡಿಸಿಕೊಳ್ಳುವ ಪ್ರಸ್ತಾವನೆ ಪರಿಶೀಲನೆಯಲ್ಲಿದೆ.

**ಕ.ಕ.ರ.ಸಾ.ನಿಗಮ:**

ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ನಿಗಮದಲ್ಲಿ 802 ಬಿ.ಎಸ್.-6 ಬಸ್‌ಗಳ ಖರೀದಿ ಪ್ರಕ್ರಿಯೆ ಪ್ರಗತಿಯಲ್ಲಿದೆ.

ಪ್ರಸ್ತುತ, ಕಲ್ಪಿಸುತ್ತಿರುವ ಸಾರಿಗೆಗಳು ಗ್ರಾಮೀಣ ಭಾಗದ ಶಾಲಾ/ಕಾಲೇಜು ವಿದ್ಯಾರ್ಥಿಗಳ ಬೇಡಿಕೆಗೆ ಅನುಗುಣವಾಗಿ ಇರುತ್ತದೆ. ಅದಾಗ್ಯೂ, ಹೆಚ್ಚುವರಿ ಬೇಡಿಕೆ ಬಂದಲ್ಲಿ, ಬೇಡಿಕೆಗೆ ಅನುಗುಣವಾಗಿ ಮೂಲಭೂತ ಸೌಕರ್ಯಗಳನ್ನು ಕ್ರೋಢೀಕರಿಸಿಕೊಂಡು ಮಾರ್ಗ ಸಮೀಕ್ಷೆ ಕೈಗೊಂಡು ಪರಿಶೀಲಿಸಿ ಸಾರಿಗೆ ಸೌಲಭ್ಯವನ್ನು ಒದಗಿಸಲು ಕ್ರಮ ಕೈಗೊಳ್ಳಲಾಗುತ್ತಿದೆ.

ಸಂಖ್ಯೆ: ಟಿಡಿ 131 ಟಿಸಿಕ್ಯೂ 2023

**(ರಾಮಲಿಂಗಾ ರೆಡ್ಡಿ)**
ಸಾರಿಗೆ ಮತ್ತು ಮುಜರಾಯಿ ಸಚಿವರು